ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನಸಭೆ ಸಚಿವಾಲಯ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 7/11/20

# ಮೂರ್ತಿ ಅರ್ಜಿ ವಜಾಗೊಳಿಸಿದ ಹೈಕೋರ್ಟ್

ವಿ.ವಾ 7-11-2020

ಬೆಂಗಳೂರು: ಅವ್ಯವಹಾರ ಆರೋಪಕ್ಕೆ ಸಂಬಂಧಿಸಿದಂತೆ ತಮ್ಮ ವಿರುದ್ಧದ ವಿಧಾನಸಭೆ ವಿಶೇಷ ಮಂಡಳಿಯ ವಿಚಾರಣೆ ರದ್ದುಪಡಿಸುವಂತೆ ಕೋರಿ ವಿಧಾನಸಭೆ ಕಾರ್ಯದರ್ಶಿ ಹುದ್ದೆಯಿಂದ ಅಮಾನತುಗೊಂಡಿರುವ ಎಸ್.ಮೂರ್ತಿ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿದೆ.



ತಮ್ಮ ವಿರುದ್ಧ ವಿಶೇಷ ಮಂಡಳಿ ನಡೆಸುತ್ತಿರುವ ವಿಚಾರಣೆಗೆ ತಡೆ ನೀಡಬೇಕೆಂದು ಕೋರಿ ಎಸ್. ಮೂರ್ತಿ ಹೈಕೋರ್ಟ್‌ಗೆ ತಕರಾರು ಅರ್ಜಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ಪೂರ್ಣಗೊಳಿಸಿ ಕಾಯ್ದಿರಿಸಿದ್ದ ತೀರ್ಪನ್ನು ನ್ಯಾ.ಎನ್.ಎಸ್. ಸಂಜಯ್‌ಗೌಡ ಅವರಿದ್ದ ಪೀಠ ಪ್ರಕಟಿಸಿದೆ. ಇದೇ ವೇಳೆ, ಅರ್ಜಿದಾರರ ವಿಚಾರಣೆಯನ್ನು 6 ತಿಂಗಳಲ್ಲಿ ಪೂರ್ಣಗೊಳಿಸುವಂತೆ ವಿಶೇಷ ಮಂಡಳಿಗೆ ತಿಳಿಸಿದೆ.

ಅರ್ಜಿದಾರರು, ತಮ್ಮ ವಿರುದ್ಧ ವಿಧಾನಸಭೆ ಸ್ಪೀಕರ್ ಸಲ್ಲಿಸಿರುವ ದೋಷಾರೋಪಪಟ್ಟಿಗೆ ವಿಶೇಷ ಮಂಡಳಿಯ ಅನುಮತಿ ಪಡೆದಿಲ್ಲ. ಆದ್ದರಿಂದ, ವಿಚಾರಣೆಗೆ ತಡೆ ನೀಡಬೇಕು ಎಂದು ಕೋರಿದ್ದರು. ಆದರೆ, ಅರ್ಜಿದಾರರನ್ನು ಅಮಾನತು ಮಾಡುವಾಗಲೇ ಅವರ ವಿರುದ್ಧದ ಆರೋಪಗಳನ್ನು ವಿಶೇಷ ಮಂಡಳಿ ಪರಿಶೀಲಿಸಿ ಕ್ರಮ ಕೈಗೊಂಡಿದೆ. ಹೀಗಿರುವಾಗ, ದೋಷಾರೋಪ ಪಟ್ಟಿಗೆ ಮತ್ತೊಮ್ಮೆ ವಿಶೇಷ ಮಂಡಳಿಯ ಅನುಮತಿ ಪಡೆಯುವ ಅಗತ್ಯವಿಲ್ಲ ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ.

**ಪ್ರಕರಣವೇನು?**

2016 ಹಾಗೂ 2017ನೇ ಸಾಲಿನಲ್ಲಿ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆದ ಅಧಿವೇಶನಕ್ಕೆ ಸಂಬಂಧಿಸಿದಂತೆ ಕೈಗೊಂಡ ಕಾಮಗಾರಿಗಳಲ್ಲಿ ಹಾಗೂ ಇತರ ವೆಚ್ಚಗಳಲ್ಲಿ ಅವ್ಯವಹಾರ ನಡೆಸಲಾಗಿದೆ ಎಂಬ ಆರೋಪ ಕೇಳಿ ಬಂದಿತ್ತು. ಈ ಹಿನ್ನೆಲೆಯಲ್ಲಿ ಸಭಾಧ್ಯಕ್ಷರ ಟಿಪ್ಪಣಿ ಹಾಗೂ ವಿಶೇಷ ಮಂಡಳಿಯ ಆದೇಶದ ಅನುಸಾರ ಎಸ್. ಮೂರ್ತಿ ಅವರನ್ನು ಅಮಾನತುಗೊಳಿಸಿ 2018ರ ಡಿ.27ರಂದು ವಿಧಾನಸಭೆ ಅಧೀನ ಕಾರ್ಯದರ್ಶಿ ಆದೇಶ ಹೊರಡಿಸಿದ್ದರು.